# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೈದನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

## ಬುಧವಾರ, ದಿನಾಂಕ:22ನೇ ಡಿಸೆಂಬರ್, 2021

## (ಸಮಯ: ಬೆಳಗ್ಗೆ: 10.30 ಗಂಟೆಗೆ)

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎಂಟನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎಂಟನೆಯ ಪಟ್ಟಿ

### 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಕಾರ್ಯದರ್ಶಿಯವರು ಸಭೆಯ ಮುಂದಿಡುವುದು.**

01. ಕರ್ನಾಟಕ ನಗರಪಾಲಿಕೆಗಳ ಮತ್ತು ಕೆಲವು ಇತರ ಕಾನೂನು (ಎರಡನೇ ತಿದ್ದುಪಡಿ) ವಿಧೇಯಕ, 2021

02. ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ, 2021

03. ಕರ್ನಾಟಕ ಕೆಲವು ಇನಾಮುಗಳ ರದ್ದಿಯಾತಿ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2021

04. ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳ (ತಿದ್ದುಪಡಿ) ವಿಧೇಯಕ, 2021

05. ಕರ್ನಾಟಕ ನಗರಪಾಲಿಕೆಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2021

06. ಕರ್ನಾಟಕ ರಾಜ್ಯ ಆಯುಷ್ ವಿಶ್ವವಿದ್ಯಾಲಯ ವಿಧೇಯಕ. 2021

07. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ಎರಡನೇ ತಿದ್ದುಪಡಿ) ವಿಧೇಯಕ, 2021

08. ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯ ವಿಧೇಯಕ, 2021

..2..

## 03. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

01. ಕರ್ನಾಟಕ ನಗರಪಾಲಿಕೆಗಳ ಮತ್ತು ಕೆಲವು ಇತರ ಕಾನೂನು (ಎರಡನೇ ತಿದ್ದುಪಡಿ) ವಿಧೇಯಕ, 2021
**ಶ್ರೀ ಬಿ.ಎ. ಬಸವರಾಜ ( ಮಾನ್ಯ ನಗರಾಭಿವೃದ್ಧಿ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2021ನೇ ಸಾಲಿನ "ಕರ್ನಾಟಕ ನಗರಪಾಲಿಕೆಗಳ ಮತ್ತು ಕೆಲವು ಇತರ ಕಾನೂನು (ಎರಡನೇ ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

02. ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ, 2021
**ಶ್ರೀ ಆರ್. ಅಶೋಕ್ (ಮಾನ್ಯ ಕಂದಾಯ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2021ನೇ ಸಾಲಿನ "ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

03. ಕರ್ನಾಟಕ ಕೆಲವು ಇನಾಮುಗಳ ರದ್ದಿಯಾತಿ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2021
**ಶ್ರೀ ಆರ್. ಅಶೋಕ್ (ಮಾನ್ಯ ಕಂದಾಯ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2021ನೇ ಸಾಲಿನ "ಕರ್ನಾಟಕ ಕೆಲವು ಇನಾಮುಗಳ ರದ್ದಿಯಾತಿ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

04. ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳ (ತಿದ್ದುಪಡಿ) ವಿಧೇಯಕ, 2021
**ಶ್ರೀ ಬಿ.ಸಿ. ಪಾಟೀಲ್ ( ಮಾನ್ಯ ಕೃಷಿ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2021ನೇ ಸಾಲಿನ "ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

05. ಕರ್ನಾಟಕ ನಗರಪಾಲಿಕೆಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2021
**ಶ್ರೀ ಬಸವರಾಜ ಬೊಮ್ಮಾಯಿ ( ಮಾನ್ಯ ಮುಖ್ಯಮಂತ್ರಿಗಳು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2021ನೇ ಸಾಲಿನ "ಕರ್ನಾಟಕ ನಗರಪಾಲಿಕೆಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

..3..

06. ಕರ್ನಾಟಕ ರಾಜ್ಯ ಆಯುಷ್ ವಿಶ್ವವಿದ್ಯಾಲಯ ವಿಧೇಯಕ. 2021
**ಡಾ: ಕೆ. ಸುಧಾಕರ ( ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2021ನೇ ಸಾಲಿನ "ಕರ್ನಾಟಕ ರಾಜ್ಯ ಆಯುಷ್ ವಿಶ್ವವಿದ್ಯಾಲಯ ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

07. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ಎರಡನೇ ತಿದ್ದುಪಡಿ) ವಿಧೇಯಕ, 2021
**ಶ್ರೀ ಬಿ.ಸಿ. ನಾಗೇಶ್ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2021ನೇ ಸಾಲಿನ "ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ಎರಡನೇ ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

08. ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯ ವಿಧೇಯಕ, 2021

**ಡಾ. ಸಿ.ಎನ್.ಅಶ್ವಥನಾರಾಯಣ ( ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2021ನೇ ಸಾಲಿನ "ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯ ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 04. ಉತ್ತರ ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟಕ ಭಾಗದ ಜ್ವಲಂತ ಸಮಸ್ಯೆಗಳ ಕುರಿತ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ

## 05. ಗಮನ ಸೆಳೆಯುವ ಸೂಚನೆಗಳು

೦1. **ಶ್ರೀಯುತರುಗಳಾದ ಕೆ.ಟಿ.ಶ್ರೀಕಂಠೇಗೌಡ, ಪುಟ್ಟಣ್ಣ, ಅರುಣ ಶಹಾಪೂರ ಮತ್ತು ಮರಿತಿಬ್ಬೇಗೌಡ** ಅವರುಗಳು ದಿನಾಂಕ:01.08.2008ರ ನಂತರ ನೇಮಕಾತಿ ಹೊಂದಿದ್ದ ಮತ್ತು ಬಡ್ತಿ ಪಡೆದ ಸರ್ಕಾರಿ ಮತ್ತು ಅನುದಾನಿತ ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜಿನ ಶಿಕ್ಷಕರು ಪಡೆಯುತ್ತಿದ್ದ ವಿಶೇಷ ಭತ್ಯೆಯನ್ನು ಸ್ಥಗಿತಗೊಳಿಸಿರುವ ಆದೇಶವನ್ನು ಕೆ.ಎ.ಟಿ. ರದ್ದುಪಡಿಸಿರುವ ನಂತರವೂ ಶಿಕ್ಷಕರಿಗೆ ವಿಶೇಷ ಭತ್ಯೆಯನ್ನು ನೀಡದೆ ಇರುವ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

02. **ಶ್ರೀ ನಸೀರ್ ಅಹ್ಮದ್** ಅವರು ಬೆಂಗಳೂರು ನಗರದ ಬ್ಯಾಟರಾಯನಪುರ ಹಾಗೂ ವರ್ತೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕೆಲವು ದಿನಗಳ ಹಿಂದೆ ಅಲ್ಪಸಂಖ್ಯಾತ ಯುವಕರ ಮೇಲೆ ಪೊಲೀಸರು ಅಮಾನುಷವಾಗಿ ಹಲ್ಲೆ ನಡೆಸಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

03. **ಶ್ರೀ ಪ್ರಕಾಶ್ ಕೆ.ರಾಥೋಡ್** ಅವರು ರೈತರ ಬೆಳೆ ಹಾನಿಗೆ ವಿಮಾ ಕಂಪನಿಗಳಿಂದ ಸೂಕ್ತ ಸಮಯದಲ್ಲಿ ವಿಮಾ ಪಾವತಿಯಾಗದೇ ಇರುವ ಕಾರಣ ರೈತರ ಬದುಕು ಅತಂತ್ರ ಸ್ಥಿತಿಯಲ್ಲಿರುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

04. **ಶ್ರೀ ಅ.ದೇವೇಗೌಡ** ಅವರು ಪದವಿ ಕಾಲೇಜುಗಳಲ್ಲಿ ಸರ್ಕಾರ ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಪೂರೈಸಿದ್ದರೂ ಸಹ ಸುಮಾರು 14 ಸಾವಿರ ಅತಿಥಿ ಉಪನ್ಯಾಸಕರು ಸೇವಾ ಭದ್ರತೆಯಿಂದ ವಂಚಿತರಾಗಿರುತ್ತಾರೆ. ಆದುದರಿಂದ, ಅವರುಗಳಿಗೆ ಸೇವಾ ಭದ್ರತೆ, ವೇತನ ಪಾವತಿ ಹಾಗೂ ಇತರೆ ಅರ್ಹ ಸೌಲಭ್ಯಗಳನ್ನು ಕಲ್ಪಿಸುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

05. **ಶ್ರೀ ಎಂ. ನಾರಾಯಣಸ್ವಾಮಿ ವಿರೋಧ ಪಕ್ಷದ ಮುಖ್ಯ ಸಚೇತಕರವರು** ಸ್ವಾತಂತ್ರ್ಯ ಹೋರಾಟಗಾರರಿಗೆ ಹಾಗೂ ಅವರ ಕುಟುಂಬ ವರ್ಗದವರಿಗೆ ನೀಡಲಾಗುತ್ತಿರುವ ಭತ್ಯೆ ಹಾಗೂ ಸೌಲಭ್ಯಗಳನ್ನು ಹೆಚ್ಚಿಸುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

06. **ಡಾ.ತೇಜಸ್ವಿನಿಗೌಡ** ಅವರು ಕರ್ನಾಟಕದ ಇತಿಹಾಸ ಪ್ರಸಿದ್ಧ ಕೆಳದಿ ಸಾಮ್ರಾಜ್ಯದ ಅರಸ-ಅರಸಿಯರು ನಾಡಿನಾದ್ಯಂತ ದೇವಾಲಯಗಳು ಹಾಗೂ ಸ್ಮಾರಕಗಳಿಗೆ ಅಪಾರವಾದ ದಾನವನ್ನು ನೀಡಿರುತ್ತಾರೆ. ಇಂದಿನ ಪೀಳಿಗೆಗೆ ನಮ್ಮ ನಾಡಿನ ಹಿರಿಯರ ಆದರ್ಶ ಗುಣಗಳನ್ನು ಸ್ಮರಿಸುವಂತೆ ಮಾಡಲು ಅಂತಹ ದೇವಾಲಯಗಳು, ಸ್ಮಾರಕಗಳ ಮುಂದೆ ಅವರುಗಳು ನೀಡಿರುವ ಕೊಡುಗೆಯ ನಾಮಫಲಕಗಳನ್ನು ಕಡ್ಡಾಯವಾಗಿ ಅಳವಡಿಸಲು ಸೂಕ್ತ ಕ್ರಮ ಜರುಗಿಸುವಂತೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

01. **ಶ್ರೀ ಸಿ.ಎಂ. ಇಬ್ರಾಹಿಂ** ಅವರು ರಾಜ್ಯದ ವಿವಿಧ ಇಲಾಖೆಗಳಲ್ಲಿ ಗುತ್ತಿಗೆ ಕಾಮಗಾರಿಗಳ ಮೊತ್ತದ ಶೇಕಡ 40ರಷ್ಟು ಮೊತ್ತ ಲಂಚದ ರೂಪದಲ್ಲಿ ವ್ಯಯವಾಗುತ್ತಿದ್ದು, ಭ್ರಷ್ಟಾಚಾರ ತಾಂಡವವಾಡುತ್ತಿರುವ ಕುರಿತು ಪ್ರಸ್ತಾಪಿಸುವುದು.

02. **ಶ್ರೀ ಪಿ.ಆರ್. ರಮೇಶ್** ಅವರು ಲೋಕಸೇವಾ ಆಯೋಗವು ಸಲ್ಲಿಸಿದ್ದ 2011ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್‌ಗಳ ಆಯ್ಕೆ ಪಟ್ಟಿ/ಸಲಹೆಗೆ ಸಂಬಂಧಿಸಿದಂತೆ ದಿನಾಂಕ:09.03.2018ರ (ರಿಟ್ ಸಂಖ್ಯೆ:13617-13627/2017 ಮಾನ್ಯ ಉಚ್ಚ ನ್ಯಾಯಾಲಯದ ತೀರ್ಪನ್ನು ಪಾಲಿಸುವುದರ ಕುರಿತು ಪ್ರಸ್ತಾಪಿಸುವುದು.

03. **ಶ್ರೀಯುತರುಗಳಾದ ಅರುಣ ಶಹಾಪೂರ, ಪುಟ್ಟಣ್ಣ, ಮರಿತಿಬ್ಬೇಗೌಡ ಮತ್ತು ಕೆ.ಟಿ.ಶ್ರೀಕಂಠೇಗೌಡ** ಅವರುಗಳು 1995ರ ನಂತರ ಆರಂಭವಾದ ಅನುದಾನ ರಹಿತ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ವಿಷಯದ ಕುರಿತು ಪ್ರಸ್ತಾಪಿಸುವುದು.

04. **ಶ್ರೀ ಶಶೀಲ್ ಜಿ. ನಮೋಶಿ** ಅವರು ಕಲ್ಯಾಣ ಕರ್ನಾಟಕ ವಿಭಾಗದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಮಕ್ಕಳ ಶಿಕ್ಷಕರ ಅನುಪಾತದಲ್ಲಾದ (ಪಿಟಿಆರ್) ತಾರತಮ್ಯ ಹೋಗಲಾಡಿಸುವ ಕುರಿತು ಪ್ರಸ್ತಾಪಿಸುವುದು.

೦೫. **ಶ್ರೀ ಮರಿತಿಬ್ಬೇಗೌಡ** ಅವರು ಮೈಸೂರು ನಗರದಲ್ಲಿ ಪದವಿ ಪೂರ್ವ ಮತ್ತು ಪದವಿ ತರಗತಿಗಳಲ್ಲಿ ಗ್ರಾಮೀಣ ಪ್ರದೇಶದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ವ್ಯಾಸಂಗ ಮಾಡುತ್ತಿದ್ದು, ಅಗತ್ಯಕ್ಕನುಗುಣವಾಗಿ ಹಿಂದುಳಿದ ವರ್ಗದ ವಸತಿ ನಿಲಯಗಳ ಕೊರತೆಗಳಿರುವುದರಿಂದ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತೊಂದರೆಯಾಗುತ್ತಿರುವ ವಿಷಯದ ಕುರಿತು ಪ್ರಸ್ತಾಪಿಸುವುದು.

೦೬. **ಡಾ. ವೈ.ಎ. ನಾರಾಯಣಸ್ವಾಮಿ** ಅವರು ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಎತ್ತಿನ ಹೊಳೆ ಕುಡಿಯುವ ನೀರಿನ ಯೋಜನೆಗೆ ಹಣ ಬಿಡುಗಡೆಯಾಗಿದ್ದರೂ ಸಹ ಭೂಸ್ವಾಧೀನ ಪ್ರಕ್ರಿಯೆ ಹಾಗೂ ನೀರು ಶೇಖರಣ ಜಲಾಶಯಗಳ ಕಾಮಗಾರಿಗಳು ಪ್ರಾರಂಭವಾಗದೆ ಇರುವುದರಿಂದ ಎತ್ತಿನ ಹೊಳೆ ಯೋಜನೆ ಅನುಷ್ಠಾನದ ಕುರಿತು ಪ್ರಸ್ತಾಪಿಸುವುದು.

೦೭. **ಶ್ರೀಯುತರುಗಳಾದ ಎನ್.ರವಿಕುಮಾರ್, ಪುಟ್ಟಣ್ಣ, ಎಸ್.ವ್ಹಿ. ಸಂಕನೂರ, ಎಸ್.ರುದ್ರೇಗೌಡ, ಪ್ರತಾಪ್ ಸಿಂಹ ನಾಯಕ್, ಡಾ. ತಳವಾರ್ ಸಾಬಣ್ಣ ಮತ್ತು ಮುನಿರಾಜು ಗೌಡ ಪಿ.ಎಂ.** ಅವರುಗಳು ದೇವಸ್ಥಾನಗಳ ಅಭಿವೃದ್ಧಿಗಾಗಿ ದಾನದ ರೂಪದಲ್ಲಿ ಪಡೆಯಲಾಗುವ ಭೂಮಿಯನ್ನು ಅಕ್ರಮವಾಗಿ ಪರಭಾರೆ ಮಾಡುತ್ತಿರುವುದರಿಂದ ದೇವಸ್ಥಾನಗಳ ಪೂಜೆಗೆ ಬಹಳ ತೊಂದರೆಯಾಗುತ್ತಿದ್ದು, ದಾನವಾಗಿ ಪಡೆದ ದೇವಸ್ಥಾನಗಳ ಭೂಮಿಯನ್ನು ದೇವರ ಹೆಸರಿನಲ್ಲಿಯೇ ಖಾತೆ/ಪಹಣಿ ಮಾಡುವ ಕುರಿತು ಪ್ರಸ್ತಾಪಿಸುವುದು.

೦೮. **ಶ್ರೀ ಸಿ.ಎಂ. ಲಿಂಗಪ್ಪ** ಅವರು ರಾಮನಗರ ತಾಲ್ಲೂಕಿನಲ್ಲಿ ಭೂ ಮಂಜೂರಾತಿ ಸಮಿತಿ ರಚನೆಗೊಂಡಾಗಿನಿಂದಲೂ ಒಂದು ಬಾರಿಯು ಸಭೆ ಸೇರದೆ ಇರುವುದರಿಂದ 2004ನೇ ಸಾಲಿನಿಂದಲೂ ಅರ್ಜಿಗಳು ವಿಲೇವಾರಿಯಾಗದೆ ಬಾಕಿ ಉಳಿದಿರುವುದಲ್ಲದೆ ಭೂ ಮಂಜೂರಾತಿ ಸಮಿತಿಯಿಂದ ಮಂಜೂರಾಗಿರುವ ಗೋಮಾಳ ಭೂಮಿಗಳಿಗೆ ಸಾಗುವಳಿ ಪತ್ರ ಸಹ ನೀಡದಿರುವುದರಿಂದ ಅರ್ಜಿದಾರರಿಗೆ ತೀವ್ರ ತೊಂದರೆಯಾಗುತ್ತಿರುವ ಕುರಿತು ಪ್ರಸ್ತಾಪಿಸುವುದು.

## 07. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯಕ್ಕೆ ಸರ್ಕಾರದಿಂದ ಉತ್ತರ

| | |
|---|---|
| ಶ್ರೀ ಎಸ್.ಆರ್. ಪಾಟೀಲ್, ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಶ್ರೀ ಎಂ.ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು ಅವರುಗಳು | ರಾಜ್ಯದಲ್ಲಿ ಇತ್ತೀಚೆಗೆ ಸಂಭವಿಸಿದ ಪ್ರವಾಹ ಮತ್ತು ಅತಿವೃಷ್ಟಿಯಿಂದ ರೈತರ ಬೆಳೆಗಳು ನಾಶವಾಗಿ, ಜಾನುವಾರುಗಳ ಪ್ರಾಣ ಹಾನಿಯಾಗಿ ಸಾರ್ವಜನಿಕ ಆಸ್ತಿಗಳಿಗೆ ಧಕ್ಕೆ ಉಂಟಾಗಿರುವ ಸಮಸ್ಯೆಗಳ ಕುರಿತು. |

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**